# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003

ಸಂಖ್ಯೆ:ಎ8/ವ.ಪ್ರ.ಪತ್ರ//17/2019–20 ದಿನಾಂಕ:16.07.2019

:: ಸುತ್ತೋಲೆ ::

ವಿಷಯ:– ವಲಸೆ ಪ್ರಮಾಣ ಪತ್ರವನ್ನು ಆನ್‌ಲೈನ್‌ನಲ್ಲಿ ಪಡೆಯಲು ಅವಕಾಶ ಕಲ್ಪಿಸಿರುವ ಬಗ್ಗೆ.

* * * * * *

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ ಪರೀಕ್ಷಾ ಏಕೀಕರಣ ನಿರ್ವಹಣಾ ವ್ಯವಸ್ಥೆ ಪ್ರಗತಿ–10 ಯೋಜನೆಯಡಿಯಲ್ಲಿ 2018 ರಿಂದ ಬಹುತೇಕ ಪರೀಕ್ಷಾ ಚಟುವಟಿಕೆಗಳನ್ನು ತಾಂತ್ರಿಕವಾಗಿ ತಂತ್ರಾಂಶಗಳನ್ನು ಅಭಿವೃದ್ಧಿ ಪಡಿಸುವ ಮೂಲಕ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿದೆ. ಮುಂದುವರೆದು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವಲಸೆ ಪ್ರಮಾಣ ಪತ್ರವನ್ನು ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಆನ್‌ಲೈನ್‌ನಲ್ಲಿಯೇ ವಲಸೆ ಪ್ರಮಾಣ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆಯನ್ನು ಮತ್ತು ಸದರಿ ಪ್ರಮಾಣ ಪತ್ರದ ನೈಜತೆಯನ್ನು ಸಹ ಆನ್‌ಲೈನ್ ಮೂಲಕವೇ ಪರಿಶೀಲಿಸಿಕೊಳ್ಳುವ ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು, ವಿವರ ಕೆಳಕಂಡಂತಿರುತ್ತದೆ.

## :: ವಲಸೆ ಪ್ರಮಾಣ ಪತ್ರವನ್ನು ಪಡೆಯಲು ಪ್ರಸ್ತುತ ಚಾಲ್ತಿಯಲ್ಲಿರುವ ವಿಧಾನ ::

ವಲಸೆ ಪ್ರಮಾಣ ಪತ್ರವನ್ನು ಪಡೆಯಲಿಚ್ಛಿಸುವ ವಿದ್ಯಾರ್ಥಿಗಳು ಮಂಡಳಿಯು ನಿಗಧಿಪಡಿಸಿರುವ ಅರ್ಜಿ ನಮೂನೆಯಲ್ಲಿ ಅಗತ್ಯ ಮಾಹಿತಿಯನ್ನು ನಮೂದಿಸಿ ಅಭ್ಯರ್ಥಿಯು ಸಹಿ ಮಾಡಿ, ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರ ಮುಖಾಂತರ ನಿಗಧಿತ ಶುಲ್ಕದೊಂದಿಗೆ ಸಂಬಂಧಿಸಿದ ವಿಭಾಗೀಯ ಕಛೇರಿಗಳಿಗೆ/ಮಂಡಳಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕಾಗಿತ್ತು. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಅರ್ಹ ವಿದ್ಯಾರ್ಥಿಗಳಿಗೆ ವಲಸೆ ಪ್ರಮಾಣ ಪತ್ರವನ್ನು ಕೈಬರಹದಲ್ಲಿ ಸಿದ್ದಪಡಿಸಿ ಅಂಚೆ ಮೂಲಕ ಸಂಬಂಧಪಟ್ಟ ಶಾಲೆಗಳಿಗೆ ರವಾನಿಸಲಾಗುತ್ತಿತ್ತು. ಇದರಿಂದ ವಿದ್ಯಾರ್ಥಿಗಳು ಸದರಿ ಪ್ರಮಾಣ ಪತ್ರವನ್ನು ಪಡೆಯಲು ಹೆಚ್ಚಿನ ಕಾಲವಕಾಶದ ಜೊತೆಗೆ ಈ ರೀತಿಯ ಪತ್ರವ್ಯವಹಾರವನ್ನು ತಡೆಗಟ್ಟಿ ವಿದ್ಯಾರ್ಥಿಗಳು ಇದ್ದಲ್ಲಿಯೇ ಸದರಿ ಸೇವೆಯನ್ನು ಆನ್‌ಲೈನ್ ಮೂಲಕ ನೀಡುವುದು ಸೂಕ್ತವೆಂದು ಮನಗಂಡು 2019ನೇ ವರ್ಷದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ಕಲ್ಪಿಸಲಾಗಿದೆ. ಆದಾಗ್ಯೂ 2018 ಮತ್ತು ಇದಕ್ಕಿಂತ ಹಿಂದಿನ ವರ್ಷಗಳಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಈ ಹಿಂದಿನ ವಿಧಾನದಂತೆಯೇ ಸದರಿ ಪ್ರಮಾಣ ಪತ್ರವನ್ನು ಪಡೆಯಲು ಕ್ರಮವಹಿಸಬೇಕಾಗಿರುತ್ತದೆ.

## :: 2019ರಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ವಲಸೆ ಪ್ರಮಾಣ ಪತ್ರವನ್ನು ಪಡೆಯಲು ಅನುಸರಿಸಬೇಕಾದ ವಿಧಾನ ::

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಜಾಲತಾಣ http://www.kseeb.kar.nic.in ರ ಮೂಲಕ ನೇರವಾಗಿ ಸದರಿ ಪ್ರಮಾಣ ಪತ್ರ ಬಯಸುವ ವಿದ್ಯಾರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ನಿಗಧಿತ ಶುಲ್ಕವನ್ನು ಆನ್‌ಲೈನ್ ಮುಖಾಂತರ ಎಲ್ಲಾ ಬ್ಯಾಂಕಿನ ಕ್ರೆಡಿಟ್ ಹಾಗೂ ಡೆಬಿಟ್ ಕಾರ್ಡ್, PAYTM ಮತ್ತು UPI PAYMENT ಮೂಲಕ ಅಥವಾ ಈ ಸೌಲಭ್ಯ ಇಲ್ಲದವರು ಆಫ್‌ಲೈನ್ ಚಲನ್‌ನನ್ನು ಸದರಿ ಜಾಲತಾಣದಲ್ಲಿ ಡೌನ್‌ಲೋಡ್ ಮಾಡಿಕೊಂಡು ಯಾವುದಾದರು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಪಾವತಿಸಬೇಕಾಗಿರುತ್ತದೆ. ಈ ಪ್ರಕ್ರಿಯೆ ಪೂರ್ಣಗೊಂಡ ನಂತರ ವಲಸೆ ಪ್ರಮಾಣ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ಹಾಗೂ ಸಂಬಂಧಪಟ್ಟವರು ಈ ಪ್ರಮಾಣ ಪತ್ರದ ನೈಜತೆಯನ್ನು ಇದೇ ಜಾಲತಾಣದಲ್ಲಿ ಪರಿಶೀಲಿಸಿಕೊಳ್ಳುವ ಅವಕಾಶವನ್ನು ಸಹ ಕಲ್ಪಿಸಲಾಗಿರುತ್ತದೆ.

ಮೇಲ್ಕಂಡ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಲು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲೆಗಳ ಮುಖ್ಯೋಪಾಧ್ಯಾಯರುಗಳಿಗೆ, ವಿದ್ಯಾರ್ಥಿಗಳು/ಪೋಷಕರುಗಳಿಗೆ ವ್ಯಾಪಕ ಪ್ರಚಾರ ನೀಡಲು ತಿಳಿಸಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

(ವಿ.ಸುಮಂಗಲ) 23/7/19
ನಿರ್ದೇಶಕರು, ಪರೀಕ್ಷೆಗಳು

**ಪ್ರತಿಯನ್ನು:**

1) ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ವಿಭಾಗೀಯ ಕಛೇರಿ ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಗುಲ್ಬರ್ಗರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಉಪ ನಿರ್ದೇಶರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.

A8_letter1